**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**
**ದೇವದುರ್ಗ.**

**ಸಿ.ಸಿ. ನಂ.422/2025**

ದೂರುದಾರರುಃ ಕರ್ನಾಟಕ ರಾಜ್ಯ,
ಜಾಲಹಳ್ಳಿ ಪೋಲಿಸ್ ಠಾಣೆ.

**ವಿರುದ್ಧ**

ಆರೋಪಿತರುಃ

1. ದುರುಗಪ್ಪ @ ಸಣ್ಣ ದುರುಗಪ್ಪ ತಂದೆ ಶಿವಪ್ಪ,
ವಯಸ್ಸು: 35 ವರ್ಷಗಳು, ಉಃ ಒಕ್ಕಲುತನ,
ಸಾಃ ಬೊಮ್ಮನಹಳ್ಳಿ, ಹಾವಾಃ ಕಚಕನೂರು, ತಾಃ ದೇವದುರ್ಗ.

2. ಅಂಬಮ್ಮ ಗಂಡ ಶಿವಪ್ಪ, ವಯಸ್ಸು: 70 ವರ್ಷಗಳು,
ಉಃ ಮನೆಕೆಲಸ, ಸಾಃ ಬೊಮ್ಮನಹಳ್ಳಿ, ತಾಃ ದೇವದುರ್ಗ.

3. ನಾಗಮ್ಮ ಗಂಡ ದುರುಗಪ್ಪ, ವಯಸ್ಸು: 40 ವರ್ಷಗಳು,
ಉಃ ಮನೆಕೆಲಸ, ಸಾಃ ಬೊಮ್ಮನಹಳ್ಳಿ, ತಾಃ ದೇವದುರ್ಗ.

**ದೋಷರೋಪಣೆ**

ಶ್ರೀ. ಸುರೇಶ ಅಣ್ಣಪ್ಪ ಸವದಿ., ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆ.ಎಂ. ಎಫ್. ಸಿ ರವರ ನ್ಯಾಯಾಧೀಶರು, ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮಗಳ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ–

1 ನೇ ಆರೋಪಿತರಾದ ನೀವು ಚಾಸಾ–1 ರವರನ್ನು ಈಗ ಸುಮಾರು 16 ವರ್ಷಗಳ ಹಿಂದೆ ಮದುವೆಯಾಗಿದ್ದು, ಕೆಲ ವರ್ಷಗಳ ನಂತರ 1 ನೇ ಆರೋಪಿತರಾದ ನೀವು ಸಾಕ್ಷಿ–1 ರವರಿಗೆ ವಿನಾಃ ಕಾರಣ ಲೇ ಸೂಳೆ ನೀನು ಸರಿಯಾಗಿಲ್ಲ ನಿನ್ನನ್ನು ಮದುವೆಯಾಗಿದ್ದು ನನ್ನದು ತಪ್ಪಾಗಿದೆ ಅಂತ ಇಲ್ಲ ಸಲ್ಲದ ಆರೋಪ ಮಾಡುತ್ತಾ ಹಾಗೂ 2 ಮತ್ತು 3 ನೇ ಆರೋಪಿತರಾದ ನೀವುಗಳು ಈ ಸೂಳೆ ಸರಿ ಇಲ್ಲ ಬಿಟ್ಟು ಬಿಡು ಇನ್ನೊಂದು ಮದುವೆ ಮಾಡುತ್ತೇವೆ ಅಂತಾ ಹೇಳಿ ಕೈಯಿಂದ ಹೊಡೆ ಬಡೆ ಮಾಡಿ ಮಾನಸಿಕ ಹಾಗೂ

ದೈಹಿಕ ಕಿರುಕುಳ ನೀಡಿ ಆ ಮೂಲಕ ಭಾರತೀಯ ನ್ಯಾಯ ಸಂಹಿತಾ ಕಲಂ.85 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ದಿನಾಂಕ 08.06.2025 ರಂದು ಬೆಳಿಗ್ಗೆ 11.30 ಗಂಟೆ ಸುಮಾರಿಗೆ ಬೊಮ್ಮನಹಳ್ಳಿ ಗ್ರಾಮದಲ್ಲಿ ಸಾಕ್ಷಿ-1 ರವರಿಗೆ ಕೈಯಿಂದ ನೂಕಾಡಿ ಹಾಗೂ ಕೂದುಲು ಹಿಡಿದು ಎಳೆದಾಡಿ ನೋವನ್ನುಂಟು ಮಾಡಿ ಆ ಮೂಲಕ ಭಾರತೀಯ ನ್ಯಾಯ ಸಂಹಿತಾ ಕಲಂ.115(2) ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಸಾಕ್ಷಿ-1 ರವರಿಗೆ ಲೇ ಸೂಳೆ ನೀನು ಈ ಮನೆಗೆ ಸರಿಯಾದ ಸೊಸೆ ಅಲ್ಲ ನೀನು ಇಲ್ಲಿ ಬರಬೇಡ ನಿನ್ನಿಂದ ಮನೆ ಉದ್ದಾರ ಆಗುತ್ತಿಲ್ಲ ಅಂತಾ ಅವಾಚ್ಯವಾಗಿ ಬೈದು ಆ ಮೂಲಕ ಭಾರತೀಯ ನ್ಯಾಯ ಸಂಹಿತಾ ಕಲಂ.352 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಸಾಕ್ಷಿ-1 ರವರಿಗೆ ಲೇ ಸೂಳೆ ನೀನು ಇನ್ನೊಂದು ಸಲ ನಮ್ಮ ಮನೆಗೆ ಜೀವನ ಮಾಡೋಕೆ ಬಂದಿ ಅಂದರೆ ನಿನ್ನನ್ನು ಜೀವ ಸಹಿತ ಬಿಡುವುದಿಲ್ಲವೆಂದು ಜೀವದ ಬೇದರಿಕೆ ಹಾಕಿ ಆ ಮೂಲಕ ಭಾರತೀಯ ನ್ಯಾಯ ಸಂಹಿತಾ ಕಲಂ.351(2) ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 18.06.2026 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**
**ದೇವದುರ್ಗ.**

**ಸಿ.ಸಿ. ನಂ.422/2025**

ದೂರುದಾರರುಃ ಕರ್ನಾಟಕ ರಾಜ್ಯ,
ಜಾಲಹಳ್ಳಿ ಪೋಲಿಸ್ ಠಾಣೆ.

**ವಿರುದ್ಧ**

ಆರೋಪಿತರುಃ

1. ದುರುಗಪ್ಪ @ ಸಣ್ಣ ದುರುಗಪ್ಪ ತಂದೆ ಶಿವಪ್ಪ,
2. ಅಂಬಮ್ಮ ಗಂಡ ಶಿವಪ್ಪ,
3. ನಾಗಮ್ಮ ಗಂಡ ದುರುಗಪ್ಪ,

:: **ಆಪಾದನೆ** ::

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ–

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ–

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ